# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮಹಿಳೆಯರ ಮತ್ತು ಮಕ್ಕಳ ಸಾಗಾಣೆ ಹಾಗೂ ಬಾಲವೇಶ್ಯಾ ಪದ್ಧತಿಯನ್ನು ತಡೆಗಟ್ಟಲು ಜಿಲ್ಲೆ, ತಾಲ್ಲೂಕು ಹಾಗೂ ಗ್ರಾಮ ಮಟ್ಟದಲ್ಲಿ ರಚಿಸಲಾಗಿರುವ ಸಮಿತಿಗಳನ್ನು ಪುನರ್‌ರಚಿಸಿ ಆದೇಶ ಹೊರಡಿಸುವ ಕುರಿತು.

**ಓದಲಾಗಿದೆ:**

1. ದಿನಾಂಕ:29.12.2004ರ ಆದೇಶ ಸಂಖ್ಯೆ: ಮಮಇ 144 ಮಭಾಬ 2004.
2. ದಿನಾಂಕ:30.05.2005ರ ಆದೇಶ ಸಂಖ್ಯೆ: ಮಮಇ 149 ಮಭಾಬ 2005.
3. ದಿನಾಂಕ:24.05.2007ರ ಆದೇಶ ಸಂಖ್ಯೆ: ಮಮಇ 34 ಮಭಾಬ 2007.
4. ದಿನಾಂಕ:28.06.2007ರ ಆದೇಶ ಸಂಖ್ಯೆ: ಮಮಇ 34 ಮಭಾಬ 2007(ಪಿ).
5. ದಿನಾಂಕ:05.10.2012ರ ಮತ್ತು ದಿನಾಂಕ:19.03.2013ರ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ರವರ ಪತ್ರ ಸಂ:ಮಮಅಇ/ಮಕ/11/2012-13.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1)ರ ದಿನಾಂಕ:29.12.2004ರ ಆದೇಶದಲ್ಲಿ ಬಾಲವೇಶ್ಯಾ ಪದ್ಧತಿ ನಿರ್ಮೂಲನೆಗಾಗಿ ರಾಜ್ಯಮಟ್ಟದ ಸಲಹಾ ಸಮಿತಿಯನ್ನು ದಿನಾಂಕ:01.10.2004ರಿಂದ ಜಾರಿಗೆ ಬರುವಂತೆ ಹಾಗೂ ಮೂರು ವರ್ಷಗಳವರೆಗೆ ಪುನರ್ ರಚಿಸಿ ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (2)ರ ದಿನಾಂಕ:30.05.2005ರ ಆದೇಶದಲ್ಲಿ ಮಹಿಳೆಯರ ಮತ್ತು ಮಕ್ಕಳ ಸಾಗಾಣೆಯನ್ನು ತಡೆಗಟ್ಟಲು ಹಾಗೂ ಸಾಗಾಣೆಗೊಳಗಾದ ಮಹಿಳೆಯರ ರಕ್ಷಣೆ ಮತ್ತು ಪುನರ್ವಸತಿ ಕಲ್ಪಿಸುವ ಸಲುವಾಗಿ ಜಿಲ್ಲೆ, ತಾಲ್ಲೂಕು ಹಾಗೂ ಗ್ರಾಮಮಟ್ಟದಲ್ಲಿ ಕಾವಲು ಸಮಿತಿಗಳನ್ನು ರಚಿಸಿ ಸದರಿ ಸಮಿತಿಗಳ ಕರ್ತವ್ಯಗಳನ್ನು ನಿರ್ದಿಷ್ಟಪಡಿಸಿ ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (3)ರ ದಿನಾಂಕ:24.05.2007ರ ಆದೇಶದಲ್ಲಿ ಪುನರ್ ರಚಿಸಲಾದ ರಾಜ್ಯಮಟ್ಟದ ಸಲಹಾ ಸಮಿತಿಯ ಕರ್ತವ್ಯಗಳಲ್ಲಿ ಮಹಿಳೆಯರ ಮತ್ತು ಮಕ್ಕಳ ಸಾಗಾಟದ ನಿರ್ಮೂಲನೆಗಾಗಿ ರೂಪಿಸಿರುವ ಕ್ರಿಯಾ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸಲಹೆಗಳನ್ನು ನೀಡಲು ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (4)ರ ದಿನಾಂಕ:28.06.2007ರ ಆದೇಶದಲ್ಲಿ ಮಹಿಳೆಯರ ಮತ್ತು ಮಕ್ಕಳ ಸಾಗಣೆಯನ್ನು ತಡೆಗಟ್ಟಲು ಮತ್ತು ಸಾಗಣೆಗೊಳಗಾದ ಮಹಿಳೆಯರ ರಕ್ಷಣೆ ಹಾಗೂ ಪುನರ್ವಸತಿ ಕಲ್ಪಿಸುವ ಸಲುವಾಗಿ ಜಿಲ್ಲೆ, ತಾಲ್ಲೂಕು ಹಾಗೂ ಗ್ರಾಮ ಮಟ್ಟದಲ್ಲಿ ದಿನಾಂಕ:30.05.2005ರ ಆದೇಶದಲ್ಲಿ ರಚಿಸಲಾಗಿದ್ದ ಕಾವಲು ಸಮಿತಿಯನ್ನು ಪುನರ್ ರಚಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ ಕ್ರಮಾಂಕ (5)ರ ದಿನಾಂಕ:05.10.2012ರ ಪತ್ರದಲ್ಲಿ ಆಯುಕ್ತರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಪ್ರಸ್ತಾವನೆಯಲ್ಲಿ ಮಹಿಳೆಯರ ಮತ್ತು ಮಕ್ಕಳ ಸಾಗಾಣೆಯನ್ನು ತಡೆಗಟ್ಟಲು ಮತ್ತು ಸಾಗಾಣೆಗೆ ಒಳಗಾದ ಮಹಿಳೆಯರ ರಕ್ಷಣೆ ಮತ್ತು ಪುನರ್ ವಸತಿ ಕಲ್ಪಿಸುವ ಸಲುವಾಗಿ ಜಿಲ್ಲೆ, ತಾಲ್ಲೂಕು ಹಾಗೂ ಗ್ರಾಮಮಟ್ಟದಲ್ಲಿ ಪುನರ್‌ರಚಿಸಲಾಗಿದ್ದ ಕಾವಲು ಸಮಿತಿಯನ್ನು ಪುನಃ ಪರಿಷ್ಕರಿಸುವ ಬಗ್ಗೆ ಕೋರಿರುತ್ತಾರೆ. ಸಮಗ್ರ ಮಕ್ಕಳ ಸಂರಕ್ಷಣಾ ಯೋಜನೆಯು ಕರ್ನಾಟಕ ರಾಜ್ಯದಲ್ಲಿ ಜಾರಿಯಲ್ಲಿರುವುದರಿಂದ, ಈ ಯೋಜನೆಯಡಿ ಪ್ರತಿ ಜಿಲ್ಲೆಯಲ್ಲಿ ಜಿಲ್ಲಾ ಸಮಗ್ರ ಮಕ್ಕಳ ರಕ್ಷಣಾಧಿಕಾರಿಗಳ ಹುದ್ದೆಯನ್ನು ಸೃಜಿಸಲಾಗಿರುವುದರಿಂದ ಮಕ್ಕಳ ರಕ್ಷಣೆಗೆ ಸಂಬಂಧಿಸಿದ ಕೆಲಸಗಳ ಉಸ್ತುವಾರಿಯನ್ನು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ನಿರ್ವಹಿಸುತ್ತಿರುವ ಹಿನ್ನೆಲೆಯಲ್ಲಿ ಮಹಿಳೆಯರ ಮತ್ತು ಮಕ್ಕಳ ಸಾಗಾಣಿಕೆಯನ್ನು ತಡೆಗಟ್ಟಲು ಹಾಗೂ ಸಾಗಾಣಿಕೆಗೆ ಒಳಗಾದ ಮಹಿಳೆಯರ ರಕ್ಷಣೆ ಪುನರ್ವಸತಿ ಕಲ್ಪಿಸುವ ಸಲುವಾಗಿ ರಚಿಸಲಾಗಿರುವ ಜಿಲ್ಲಾ ಮಟ್ಟದ ಸಮಿತಿಗೆ ಜಿಲ್ಲಾ ಸಮಗ್ರ ಮಕ್ಕಳ ರಕ್ಷಣಾಧಿಕಾರಿಗಳನ್ನು ಸದಸ್ಯರನ್ನಾಗಿ ಹಾಗೂ ಸದರಿ ಜಿಲ್ಲಾ ಮಟ್ಟದ ಸಮಿತಿಗೆ ಸಿವಿಲ್

ನ್ಯಾಯಾಧೀಶರು(ಹಿರಿಯ ವಿಭಾಗ) ಮತ್ತು ಮುಖ್ಯ ಜುಡಿಶಿಯಲ್ ಮ್ಯಾಜಿಸ್ಟ್ರೇಟ್ ಇವರನ್ನೂ ಸಹ ಸದಸ್ಯರನ್ನಾಗಿ ಹಾಗೂ ತಾಲ್ಲೂಕು ಮಟ್ಟದ ಕಾವಲು ಸಮಿತಿಗೆ ಸಿವಿಲ್ ನ್ಯಾಯಾಧೀಶರು (ಕಿರಿಯ ವಿಭಾಗ) ಮತ್ತು ಜೆ.ಎಂ.ಎಫ್.ಸಿ. ಇವರನ್ನು ಸದಸ್ಯರನ್ನಾಗಿ ಸೇರ್ಪಡೆ ಮಾಡಿ ಪರಿಷ್ಕೃತ ಆದೇಶ ಹೊರಡಿಸುವಂತೆ ಕೋರಿ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

**<u>ಸರ್ಕಾರದ ಆದೇಶ ಸಂಖ್ಯೆ: ಮಮಇ 128 ಮಭಾಅ 2012, ಬೆಂಗಳೂರು, ದಿನಾಂಕ: 04ನೇ ಜೂನ್ 2013.</u>**

ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಮಹಿಳೆಯರ ಮತ್ತು ಮಕ್ಕಳ ಸಾಗಣೆಯನ್ನು ತಡೆಗಟ್ಟಲು ಮತ್ತು ಸಾಗಣೆಗೊಳಗಾದ ಮಹಿಳೆಯರ ರಕ್ಷಣೆ ಹಾಗೂ ಪುನವರ್ಸತಿ ಕಲ್ಪಿಸುವ ಸಲುವಾಗಿ ಜಿಲ್ಲೆ, ತಾಲ್ಲೂಕು ಹಾಗೂ ಗ್ರಾಮ ಮಟ್ಟದಲ್ಲಿ ದಿನಾಂಕ:28.06.2007ರ ಆದೇಶದಲ್ಲಿ ರಚಿಸಲಾಗಿದ್ದ ಸಮಿತಿಯನ್ನು ಈ ಕೆಳಕಂಡಂತೆ ಪುನರ್‌ರಚಿಸಿ ಆದೇಶಿಸಲಾಗಿದೆ.

(ಅ) ಜಿಲ್ಲಾ ಮಟ್ಟದ ಸಮಿತಿಗಳು:

| | | |
|---|---|---|
| ಜಿಲ್ಲಾಧಿಕಾರಿ | | |
| ಜಿಲ್ಲಾ ಪಂಚಾಯತ್‌ನ ಮಹಿಳಾ ಸದಸ್ಯ | – | ಅಧ್ಯಕ್ಷರು |
| (ಜಿಲ್ಲಾಧಿಕಾರಿಯವರಿಂದ ನಾಮ ನಿರ್ದೇಶಿತರಾದವರು) | – | ಉಪಾಧ್ಯಕ್ಷರು |
| ಮುಖ್ಯ ಕಾರ್ಯನಿರ್ವಹಣಾಧಿಕಾರಿ | | |
| ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ | – | ಸದಸ್ಯರು |
| ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ | – | ಸದಸ್ಯರು |
| ಜಿಲ್ಲಾ ಕಾರ್ಮಿಕ ಕಲ್ಯಾಣಾಧಿಕಾರಿ | – | ಸದಸ್ಯರು |
| ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ | – | ಸದಸ್ಯರು |
| ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ | – | ಸದಸ್ಯರು |
| ಸಮಿತಿಯ ಅಧ್ಯಕ್ಷರಿಂದ ನಾಮನಿರ್ದೇಶಿತರಾದ 3 ಸ್ವಯಂ ಸೇವಾ ಸಂಸ್ಥೆಗಳು | – | ಸದಸ್ಯರು |
| ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ | – | ಸದಸ್ಯರು |
| ಸಿವಿಲ್ ನ್ಯಾಯಾಧೀಶರು (ಹಿರಿಯ ವಿಭಾಗ) ಮತ್ತು ಮುಖ್ಯ ಜುಡಿಶಿಯಲ್ ಮ್ಯಾಜಿಸ್ಟ್ರೇಟ್ | – | ಸದಸ್ಯರು |
| ಜಿಲ್ಲಾ ಉಪ ನಿರ್ದೇಶಕರು/ | – | ಸದಸ್ಯರು |
| ಸಹಾಯಕ ನಿರ್ದೇಶಕರು, ಮಮಅಇ | – | ಸದಸ್ಯ ಕಾರ್ಯದರ್ಶಿ |

<u>ಕರ್ತವ್ಯಗಳು:</u>

1. ಮಹಿಳೆಯರ ಮತ್ತು ಮಕ್ಕಳ ಸಾಗಣೆಗೆ ಮುಖ್ಯ ಕಾರಣಗಳು, ಸಮಸ್ಯೆಯ ತೀವ್ರತೆಯನ್ನು ಗುರುತಿಸಿ ಇವರ ವಿರುದ್ಧ ಅರಿವು ಮೂಡಿಸಲು ಸ್ವ-ಸಹಾಯ ಗುಂಪು, ಯುವ ಸಂಘಟನೆ, ಚಲನಚಿತ್ರ ಹಾಗೂ ಪತ್ರಿಕೆಗಳ ಮೂಲಕ ಅರಿವು ಮೂಡಿಸಬೇಕು.
2. ಜಿಲ್ಲಾ ವ್ಯಾಪ್ತಿಗೊಳಪಡುವ ತಾಲ್ಲೂಕು ಹಾಗೂ ಗ್ರಾಮ ಮಟ್ಟದ ಸಾಗಣೆ ವಿರುದ್ಧ ಕ್ರಿಯಾ ಯೋಜನೆ ತಯಾರಿಸುವಲ್ಲಿ ಪರಿಗಣಿಸಬೇಕಾಗಿರುವ ಮುಖ್ಯ ವಿಷಯಗಳನ್ನು ಗುರುತಿಸುವುದು.
3. ಜಿಲ್ಲಾ ಮಟ್ಟದಲ್ಲಿ ಮಹಿಳೆಯರ ಮತ್ತು ಮಕ್ಕಳ ಸಾಗಣೆ ತಡೆಗಟ್ಟಲು ಕಾವಲುಪಡೆ ನೇಮಿಸುವುದಲ್ಲದೆ ಸೂಕ್ಷ್ಮ ಪ್ರದೇಶ ಗುರುತಿಸುವುದು.
4. ಸಾಗಣೆಯಿಂದ ತಡೆಯಲ್ಪಟ್ಟವರ ವಸತಿ ಹಾಗೂ ಶಿಕ್ಷಣದ ಮುಖ್ಯವಾಹಿನಿಗೆ ತರುವುದು.

5. ಸ್ವಯಂ ಸೇವಾ ಸಂಸ್ಥೆಗಳ ನೆರವಿನಿಂದ, ಸಾಗಣೆಗೊಳಪಟ್ಟವರನ್ನು ಮತ್ತೆ ಕುಟುಂಬದೊಡನೆ ಸೇರಿಸುವುದು.
6. ಸ್ವಸಹಾಯ ಗುಂಪುಗಳ ಮೂಲಕ ಸಾಗಣೆಗೊಳಪಟ್ಟ ಮಹಿಳೆಯರನ್ನು ಆದಾಯೋತ್ಪನ್ನ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ವೃತ್ತಿ ತರಬೇತಿ ಅನುಕೂಲ ಮಾಡಿಕೊಡುವುದು.
7. ಎಚ್.ಐ.ವಿ. ಸೋಂಕಿತ ಮಕ್ಕಳ ರಕ್ಷಣೆ ಹಾಗೂ ಸರ್ವತೋಮುಖ ಅಭಿವೃದ್ಧಿಗಾಗಿ ಅವಕಾಶ ಕಲ್ಪಿಸುವುದು.
8. ಸಾಗಣೆದಾರರನ್ನು ಕಾನೂನು ರೀತ್ಯಾ ಶಿಕ್ಷೆಗೆ ಒಳಪಡಿಸಿ ಶೋಷಿತರಿಗೆ ನ್ಯಾಯಒದಗಿಸುವ ವ್ಯವಸ್ಥೆ ಕಲ್ಪಿಸಬೇಕು.
9. ಜಿಲ್ಲಾ ಮಟ್ಟದಲ್ಲಿ ನಿರ್ಗತಿಕ ಮಕ್ಕಳಿಗೆ ಅನುಪಾಲನಾ ಗೃಹಗಳಲ್ಲಿ ಅವಕಾಶ ಕಲ್ಪಿಸಿ ಸಾಗಣೆಗೊಳಪಡಬಹುದಾದ ಮಕ್ಕಳನ್ನು ರಕ್ಷಿಸುವುದು.
10. ತಾಲ್ಲೂಕು ಮತ್ತು ಗ್ರಾಮ ಮಟ್ಟದ ಸಮಿತಿಗಳಿಗೆ ಸಲಹೆಗಳನ್ನು ನೀಡುವುದು.
11. ಕಾಣೆಯಾದ ಮಕ್ಕಳ ಬಗ್ಗೆ ಮಾಹಿತಿ ನೀಡುವುದು ಹಾಗೂ ಅವರನ್ನು ಪತ್ತೆಹಚ್ಚಲು ಕ್ರಮವಹಿಸುವುದು.

**(ಆ) ತಾಲ್ಲೂಕು ಮಟ್ಟದ ಸಮಿತಿಗಳು:**

| | | |
|---|---|---|
| 1. ತಹಶೀಲ್ದಾರ್ | | |
| 2. ತಾಲ್ಲೂಕು ಪಂಚಾಯತ್ ಸದಸ್ಯೆ(ಮಹಿಳೆ) | – | ಅಧ್ಯಕ್ಷರು |
| (ತಹಶೀಲ್ದಾರ್‌ರವರಿಂದ ನಾಮನಿರ್ದೇಶನಗೊಂಡವರು) | – | ಉಪಾಧ್ಯಕ್ಷರು |
| 3. ತಾಲ್ಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿ | | |
| 4. ತಾಲ್ಲೂಕು ಆರೋಗ್ಯಾಧಿಕಾರಿ | – | ಸದಸ್ಯರು |
| 5. ತಾಲ್ಲೂಕು ಶಿಕ್ಷಣಾಧಿಕಾರಿ | – | ಸದಸ್ಯರು |
| 6. ಕಾರ್ಮಿಕ ನಿರೀಕ್ಷಕರು | – | ಸದಸ್ಯರು |
| 7. ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿಗಳು | – | ಸದಸ್ಯರು |
| 8. ಆರಕ್ಷಕ ನಿರೀಕ್ಷಕರು | – | ಸದಸ್ಯರು |
| 9. ಸಮಿತಿಯ ಅಧ್ಯಕ್ಷರಿಂದ ನಾಮ ನಿರ್ದೇಶನಗೊಂಡ | – | ಸದಸ್ಯರು |
| ಮತ್ತು ಎರಡು ಸ್ವಯಂ ಸೇವಾ ಸಂಸ್ಥೆಗಳು | – | ಸದಸ್ಯರು |
| 10. ತಾಲ್ಲೂಕು ಸ್ತ್ರೀಶಕ್ತಿ ಒಕ್ಕೂಟದ ಅಧ್ಯಕ್ಷರು | | |
| 11. ಸಿವಿಲ್ ನ್ಯಾಯಾಧೀಶರು (ಕಿರಿಯ ವಿಭಾಗ) ಮತ್ತು ಜೆ.ಎಂ.ಎಫ್.ಸಿ. | – | ಸದಸ್ಯರು |
| 12. ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು | – | ಸದಸ್ಯರು |
| | – | ಸದಸ್ಯ ಕಾರ್ಯದರ್ಶಿ. |

**ಕರ್ತವ್ಯಗಳು:**

1. ಗ್ರಾಮ ಹೋಬಳಿ ಮಟ್ಟದಲ್ಲಿ ಮಕ್ಕಳ ಮಾಹಿತಿಯನ್ನು ಇಟ್ಟುಕೊಳ್ಳುವುದು.
2. ಗ್ರಾಮ ಮಟ್ಟದ ಸಮಿತಿ ಸದಸ್ಯರನ್ನು ತಾಲ್ಲೂಕು ಮಟ್ಟದಲ್ಲಿ ಮಹಿಳೆಯರ ಮತ್ತು ಮಕ್ಕಳ ಮಾರಾಟದ ವಿರುದ್ಧ ನಡೆಸುವ ಪ್ರಚಾರಾಂದೋಲನ ಕಾರ್ಯಕ್ರಮಗಳಲ್ಲಿ ತೊಡಗಿಸುವುದು. ಸ್ವಸಹಾಯ ಸಂಘಗಳಿ, ಸಾರ್ವಜನಿಕವಾಗಿ ಸಾಗಣೆ ವಿರೋಧಿಸಲು ಕ್ರಮ ಜರುಗಿಸುವುದು.
3. ತಾಲ್ಲೂಕು ಮಟ್ಟದಲ್ಲಿ ಮಹಿಳೆಯರ ಮತ್ತು ಮಕ್ಕಳ ಸಾಗಣೆ ವಿರುದ್ಧ ಪ್ರಕರಣಗಳು ಪೋಲಿಸ್ ಇಲಾಖೆಯಲ್ಲಿ ದಾಖಲಾಗಿವೆಯೇ, ಈ ದಾಖಲೆಗೆ ಸಂಬಂಧಿಸಿದಂತೆ ಕೈಗೊಂಡಿರುವ ಕ್ರಮದ ಬಗ್ಗೆ ಪರಿಶೀಲನೆ ನಡೆಸುವುದು.
4. ತಾಲ್ಲೂಕು ಮಟ್ಟದಲ್ಲಿ ಸಂಪರ್ಕ ಕೇಂದ್ರಗಳನ್ನು ಬಸ್ ನಿಲ್ದಾಣ ರೈಲ್ವೆ ನಿಲ್ದಾಣದಲ್ಲಿ ಪ್ರಾರಂಭಿಸಿ ಸಾಗಣೆ ಬಗ್ಗೆ ಗಮನಹರಿಸುವುದು.

5. ಸಾಗಣೆಗೊಳಪಟ್ಟ ಮಕ್ಕಳ ನೆರವಿಗಾಗಿ ಪೋಲಿಸ್ ನೆರವಿನೊಂದಿಗೆ ತಾಲ್ಲೂಕು ವ್ಯಾಪ್ತಿಯಲ್ಲಿ ಸಹಾಯವಾಣಿ ಪ್ರಾರಂಭಿಸುವುದಲ್ಲದೆ ಶೋಷಣೆಗೊಳಗಾದ ಮಕ್ಕಳಿಗೆ ಸಹಾಯ ಕಲ್ಪಿಸುವುದು.
6. ತಾಲ್ಲೂಕು ಮಟ್ಟದಲ್ಲಿ ಮಹಿಳೆಯರ ಮತ್ತು ಮಕ್ಕಳ ಸಾಗಣೆ ವಿರುದ್ಧ ಕಾವಲುಪಡೆ ರಚಿಸಬೇಕು. ತಾಲ್ಲೂಕು ವ್ಯಾಪ್ತಿಯಲ್ಲಿ ಮಕ್ಕಳ ಸಾಗಣೆ ಬಗ್ಗೆ ಸುಳಿವು ದೊರೆತ ಕೂಡಲೇ ಮಗುವನ್ನು ಸಾಗಣೆಯಿಂದ ತಪ್ಪಿಸಲು ಪೋಲಿಸ್ ಇಲಾಖೆ ನೆರವು ಪಡೆದು ಕ್ರಮ ಕೈಗೊಳ್ಳಬೇಕು.
7. ಪಂಚಾಯಿತ್ತಿ ಹಂತಗಳಲ್ಲಿ ಸಾಗಣೆ ವಿರುದ್ಧ ಕ್ರಮಕ್ಕಾಗಿ ಕ್ರಿಯಾ ಯೋಜನೆ ರೂಪಿಸುವುದು.
8. ಸ್ಥಳೀಯ ಸ್ವಯಂ ಸೇವಾ ಸಂಘಗಳ ಸಹಾಯದಿಂದ ಸಾಗಣೆಗೊಳಪಟ್ಟಿರುವ/ಕಾಣೆಯಾದ ಮಕ್ಕಳ ಬಗ್ಗೆ ಕ್ರಮಬದ್ಧವಾದ ಮಾಹಿತಿ ಇರಿಸುವುದು.

**(ಇ) ಗ್ರಾಮ ಪಂಚಾಯ್ತಿ ಮಟ್ಟದ ಸಮಿತಿ:**

1. ಗ್ರಾಮ ಪಂಚಾಯ್ತಿ ಅಧ್ಯಕ್ಷರು – ಅಧ್ಯಕ್ಷರು
2. ಶಾಲಾ ಮುಖ್ಯ ಉಪಾಧ್ಯಾಯರು – ಅಧ್ಯಕ್ಷರು
   (ಇಬ್ಬರು ಮುಖ್ಯೋಪಾಧ್ಯಾಯರಿದ್ದಲ್ಲಿ ಮಹಿಳೆಯರಿಗೆ ಆದ್ಯತೆ ನೀಡಿ ನಿರ್ದಿಷ್ಟವಾಗಿ ಆಯ್ಕೆ ಮಾಡುವುದು)
3. ಗ್ರಾಮಪಂಚಾಯಿತಿ ಕಾರ್ಯದರ್ಶಿ
4. ಗ್ರಾಮಲೆಕ್ಕಿಗರು (ಮಹಿಳೆಯರಿಗೆ ಆದ್ಯತೆ) – ಸದಸ್ಯರು
5. ಅಂಗನವಾಡಿ ಕಾರ್ಯಕರ್ತೆ – ಸದಸ್ಯರು
   (ಆ ಗ್ರಾಮದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರು) – ಸದಸ್ಯರು
6. ಎ.ಎನ್.ಎಂ
7. ಸ್ತ್ರೀಶಕ್ತಿ ಸಂಘದ ಪ್ರತಿನಿಧಿ (ಪ್ರತಿ ಗ್ರಾಮದಿಂದ ಒಬ್ಬರು) – ಸದಸ್ಯರು
8. ಮಹಿಳಾ ಮಂಡಳಿಗಳ ಸದಸ್ಯರು – ಸದಸ್ಯರು
9. ಯುವತಿ ಮಂಡಳಿಗಳ ಸದಸ್ಯರು – ಸದಸ್ಯರು
10. ಮೇಲ್ವಿಚಾರಕಿಯರು – ಸದಸ್ಯರು
    ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ – ಸದಸ್ಯ ಕಾರ್ಯದರ್ಶಿ.

**ಕರ್ತವ್ಯಗಳು:**

1. ಗ್ರಾಮ ಪಂಚಾಯ್ತಿ ಮಟ್ಟದಲ್ಲಿ ಮಕ್ಕಳ ಸಂಖ್ಯೆಗಳ ವಿವರ ಲಭ್ಯವಾಗುವಂತಹ ಇರಿಸಬೇಕು. ಪಂಚಾಯ್ತಿ ಮಟ್ಟದಲ್ಲಿ 18 ವರ್ಷದೊಳಗಿನ ಎಲ್ಲಾ ಮಕ್ಕಳ ಮಾಹಿತಿಯನ್ನು ಹೊಂದಿರಬೇಕು.
2. ಶಾಲೆಗೂ ಪಂಚಾಯ್ತಿಗಳಿಗೂ ಮಾಹಿತಿ ಹಂಚಿಕೆ ವ್ಯವಸ್ಥೆ ಕಲ್ಪಿಸುವಲ್ಲಿ ಸಹಕರಿಸಬೇಕು. ಪಂಚಾಯ್ತಿ ಕಚೇರಿ, ಶಾಲೆ, ಪೋಲಿಸು, ಅಂಗನವಾಡಿ ಮಹಿಳಾ ಸ್ವಸಹಾಯ ಸಂಘಗಳು, ಯುವ ಸಂಘಟನೆಗಳು ಮಕ್ಕಳ ಬಗ್ಗೆ ಪರಸ್ಪರ ವಿಚಾರ ವಿನಿಮಯ ಮಾಡಿಕೊಳ್ಳಬೇಕು.
3. ಮಾರಾಟ ಸಾಗಣೆಗೊಳಗಾದ ಮಹಿಳೆಯರಿಗೆ ಮತ್ತು ಮಕ್ಕಳಿಗೆ ರಕ್ಷಣೆ ನೀಡುವುದು ಮತ್ತು ಅವರಿಗೆ ಹಾಗೂ ಅವರ ಕುಟುಂಬಗಳಿಗೆ ಆರ್ಥಿಕ, ನೈತಿಕ, ಸಾಮಾಜಿಕ, ವೈದ್ಯಕೀಯ ಹಾಗೂ ಶೈಕ್ಷಣಿಕ ಸಹಾಯವನ್ನು ನೀಡಬಲ್ಲವರನ್ನು ಗುರುತಿಸುವುದು.
4. ಸಮುದಾಯದ ಎಲ್ಲರ ಭಾಗವಹಿಸುವಿಕೆಯೊಂದಿಗೆ ಸಾಗಣೆಯನ್ನು ನಿಷೇದಿಸುವಲ್ಲಿ ಉಸ್ತುವಾರಿ ಮಾಡುವುದು.

5. ಸಾಗಣೆ ತಡೆಯಲು ಗ್ರಾಮಮಟ್ಟದಲ್ಲಿ ಅರಿವು ಮೂಡಿಸಲು ಕಾರ್ಯಕ್ರಮ ಮಾಡುವುದು, ಸಾಗಣೆ ತಡೆಯಲು ಪ್ರಚಾರಕ್ಕಾಗಿ ಮಾಹಿತಿ ಸಂಗ್ರಹಿಸಿ, ಉತ್ತಮವಾದ ಸಾಮಾಜಿಕ ವ್ಯವಸ್ಥೆಗಾಗಿ ಬೇಕಾದ ಸಂಪನ್ಮೂಲಗಳ ಕ್ರೋಢೀಕರಣಗೊಳಿಸುವುದು.
6. ಮಕ್ಕಳ ಸಾಗಣೆ ವಿರುದ್ಧ ಶಾಳೆಗಳಲ್ಲಿ ಮಕ್ಕಳಿಗೆ ಅರಿವು ಮೂಡಿಸಬೇಕು. ಅಂಗನವಾಡಿ ಕೇಂದ್ರದಲ್ಲಿ ಕಾರ್ಯನಿರ್ವಹಿಸುವ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರಿಗೂ ಸಹ ಮಕ್ಕಳ ಸಾಗಣೆ ವಿರುದ್ಧ ಕೈಗೊಳ್ಳಬಹುದಾದ ಎಚ್ಚರಗಳ ಬಗ್ಗೆ ಅರಿವು ಮೂಡಿಸಬೇಕು.
7. ಹೊಸ ವ್ಯಕ್ತಿಗಳು ಗ್ರಾಮಕ್ಕೆ ಆಗಮಿಸಿದ ಬಗ್ಗೆ ದಾಖಲೆ ಇಡಬೇಕು.
8. ಗ್ರಾಮದಿಂದ ಕಾಣೆಯಾದ ಮಹಿಳೆಯರ ಮತ್ತು ಮಕ್ಕಳ ದಾಖಲೆ ಇಡಬೇಕು.

ಇದಲ್ಲದೆ ಮಹಿಳೆಯರ ಮತ್ತು ಮಕ್ಕಳ ಸಾಗಣೆಯನ್ನು ತಡೆಗಟ್ಟಲು ಮಹಿಳೆಯರ ಮತ್ತು ಮಕ್ಕಳ ಮಾಹಿತಿಯನ್ನು ನಿರ್ವಹಿಸಬೇಕಾಗಿದ್ದು, ಈ ಮಾಹಿತಿಯನ್ನು ಎಲ್ಲಾ ಹಂತದಲ್ಲಿ ನಿರ್ದಿಷ್ಟವಾಗಿ ಅಪ್‌ಡೇಟ್ ಮಾಡಲು ಅನುಕೂಲವಾಗಲು ಪ್ರಪತ್ರಗಳನ್ನು ಅನುಬಂಧ-1 ಹಾಗೂ 2ರಂತೆ ನಿಗದಿಪಡಿಸಿದೆ.

ಜಿಲ್ಲಾ ಮಟ್ಟದ, ತಾಲ್ಲೂಕು ಮಟ್ಟದ ಮತ್ತು ಗ್ರಾಮ ಮಟ್ಟದ ಸಮಿತಿಯು ತಪ್ಪದೇ ಮೂರು ತಿಂಗಳಿಗೊಮ್ಮೆ ಸಭೆ ಸೇರಿ ತಾಲ್ಲೂಕು ಮಟ್ಟದ ಸಮಿತಿಯು ಮಹಿಳೆಯರ ಮತ್ತು ಮಕ್ಕಳ ಸಾಗಣೆ ತಡೆಗಟ್ಟಲು ಕೈಗೊಂಡಿರುವ ಕ್ರಮಗಳ ಬಗ್ಗೆ ವಿಮರ್ಶಿಸತಕ್ಕದ್ದು. ಸದರಿ ಸಮಿತಿಯ ತ್ರೈಮಾಸಿಕ ಸಭೆಯನ್ನು ಕಾಲಕಾಲಕ್ಕೆ ನಡೆಸುವುದು ಸದಸ್ಯ ಕಾರ್ಯದರ್ಶಿಗಳ ಜವಾಬ್ದಾರಿಯಾಗಿರುತ್ತದೆ.

ಜಿಲ್ಲಾ ಮಟ್ಟದ ಸದಸ್ಯರು ಎಲ್ಲಾ ತಾಲ್ಲೂಕುಗಳಲ್ಲೂ ಮಕ್ಕಳ ಸಹಾಯವಾಣಿ ಕೇಂದ್ರಗಳನ್ನು ಪ್ರಾರಂಭಿಸುವಂತೆ ಪ್ರೇರೇಪಿಸುವುದಲ್ಲದೇ ಆರು ತಿಂಗಳಿಗೊಮ್ಮೆ ಮಕ್ಕಳ ಸಾಗಣೆಗೆ ಸಂಬಂಧಿಸಿದ ಅಂಕಿ ಅಂಶಗಳನ್ನು ರಾಜ್ಯ ಮಟ್ಟದ ಸಮಿತಿಗೆ ವರದಿ ಮಾಡತಕ್ಕದ್ದು.

ರಾಜ್ಯ ಮಟ್ಟದ ಸಲಹಾ ಸಮಿತಿಯು ಆರು ತಿಂಗಳಿಗೊಮ್ಮೆ ಸಭೆ ಸೇರಿ ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ವಿಮರ್ಶೆ ಮಾಡಿ ಸೂಕ್ತ ಸಲಹೆ ನೀಡತಕ್ಕದ್ದು.

ಈ ಆದೇಶದಲ್ಲಿನ ಅಂಶಗಳನ್ನು ಯಥಾವತ್ತಾಗಿ ಪಾಲಿಸುವಂತೆ ಸಂಬಂಧಪಟ್ಟ ಎಲ್ಲರಿಗೂ ಈ ಮೂಲಕ ಸೂಚನೆ ನೀಡಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

T. Krishnaiah
(ಟಿ.ಕೃಷ್ಣಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ-1(ಪ್ರ),
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ.

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು-ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಕೋರಲಾಗಿದೆ.

1. ಸರ್ಕಾರದ ಮುಖ್ಯಕಾರ್ಯದರ್ಶಿ, ಕರ್ನಾಟಕ ಸರ್ಕಾರ, ಬೆಂಗಳೂರು.

2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ.
4. ಸರ್ಕಾರದ ಕಾರ್ಯದರ್ಶಿ(ಪಿ.ಸಿ.ಎ.ಎಸ್), ಒಳಾಡಳಿತ ಇಲಾಖೆ, ವಿಧಾನಸೌಧ.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ.
7. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
8. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ, ಬೆಂಗಳೂರು.
9. ಎಲ್ಲಾ ಜಿಲ್ಲಾಧಿಕಾರಿಗಳು/ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು/ತಹಶೀಲ್ದಾರ್ (ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಮುಖಾಂತರ.)
10. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಕೃಷಿಭವನ, ನೃಪತುಂಗ ರಸ್ತೆ, ಬೆಂಗಳೂರು.
11. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಹಿಳಾ ಆಯೋಗ, ಬೆಂಗಳೂರು.
12. ವಾರ್ತಾಧಿಕಾರಿ, ವಾರ್ತಾ ಇಲಾಖೆ.
13. ಎಲ್ಲಾ ಉಪ ನಿರ್ದೇಶಕರು/ಸಹಾಯಕ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.(ನಿರ್ದೇಶಕರ ಮುಖಾಂತರ)
14. ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಮಟ್ಟದ ಕಾವಲು ಸಮಿತಿಗಳ ಎಲ್ಲಾ ಸದಸ್ಯರು (ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆರವರ ಮುಖಾಂತರ.)
15. ಶಾಖಾರಕ್ಷ ಕಡತ/ ಹೆಚ್ಚುವರಿ ಪ್ರತಿಗಳು.

# ಕರ್ನಾಟಕ ಸರ್ಕಾರ

ಸಂಖ್ಯೆ: ಮಮಇ 201 ಮಭಾಬ 2013

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:18.09.2013.

## ತಿದ್ದುಪಡಿ

ಮಹಿಳೆಯರ ಮತ್ತು ಮಕ್ಕಳ ಸಾಗಾಣೆ ಹಾಗೂ ಬಾಲವೇಶ್ಯಾ ಪದ್ಧತಿಯನ್ನು ತಡೆಗಟ್ಟಲು ಜಿಲ್ಲೆ, ತಾಲ್ಲೂಕು ಹಾಗೂ ಗ್ರಾಮ ಮಟ್ಟದಲ್ಲಿ ರಚಿಸಲಾಗಿರುವ ಸಮಿತಿಗಳನ್ನು ಪುನರ್‌ರಚಿಸಿ ದಿನಾಂಕ:04.06.2013ರಂದು ಹೊರಡಿಸಲಾದ ಸರ್ಕಾರಿ ಆದೇಶ ಸಂ: ಮಮಇ 128 ಮಭಾಬ 2012ರ ಆದೇಶ ಭಾಗದ ಮೊದಲನೇ ಕಂಡಿಕೆಯ 4ನೇ ಸಾಲಿನಲ್ಲಿರುವ " ರಚಿಸಲಾಗಿದ್ದ ಸಮಿತಿಯನ್ನು " ಎಂಬುದರ ಬದಲಾಗಿ " ರಚಿಸಲಾಗಿದ್ದ ಕಾವಲು ಸಮಿತಿಯನ್ನು " ಎಂದು ಹಾಗೂ ಆದೇಶ ಭಾಗದ (ಇ) ಗ್ರಾಮ ಪಂಚಾಯಿತಿ ಮಟ್ಟದ ಸಮಿತಿಯಲ್ಲಿ ಕ್ರಮ ಸಂಖ್ಯೆ 2ರಲ್ಲಿ " ಶಾಲಾ ಮುಖ್ಯ ಉಪಾಧ್ಯಾಯರು – ಅಧ್ಯಕ್ಷರು " ಎಂಬುದರ ಬದಲಾಗಿ " ಶಾಲಾ ಮುಖ್ಯೋಪಾಧ್ಯಾಯರು – ಉಪಾಧ್ಯಕ್ಷರು " ಎಂದು ತಿದ್ದಿಕೊಂಡು ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಂ.ಕೆ.ಜಕಾ)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯಕಾರ್ಯದರ್ಶಿ, ಕರ್ನಾಟಕ ಸರ್ಕಾರ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ.
5. ಸರ್ಕಾರದ ಕಾರ್ಯದರ್ಶಿ(ಪಿ.ಸಿ.ಎ.ಎಸ್), ಒಳಾಡಳಿತ ಇಲಾಖೆ, ವಿಧಾನಸೌಧ.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ.
7. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ.
8. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.

9. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ, ಬೆಂಗಳೂರು.
10. ಎಲ್ಲಾ ಜಿಲ್ಲಾಧಿಕಾರಿಗಳು/ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು / ತಹಶೀಲ್ದಾರ್ (ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಮುಖಾಂತರ.)
11. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಕೃಷಿಭವನ, ನೃಪತುಂಗ ರಸ್ತೆ, ಬೆಂಗಳೂರು.
12. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಹಿಳಾ ಆಯೋಗ, ಬೆಂಗಳೂರು.
13. ವಾರ್ತಾಧಿಕಾರಿ, ವಾರ್ತಾ ಇಲಾಖೆ.
14. ಎಲ್ಲಾ ಉಪ ನಿರ್ದೇಶಕರು/ಸಹಾಯಕ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.(ನಿರ್ದೇಶಕರ ಮುಖಾಂತರ)
15. ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಮಟ್ಟದ ಕಾವಲು ಸಮಿತಿಗಳ ಎಲ್ಲಾ ಸದಸ್ಯರು (ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆರವರ ಮುಖಾಂತರ.)
16. ಶಾಖಾರಕ್ಷ ಕಡತ / ಹೆಚ್ಚುವರಿ ಪ್ರತಿಗಳು.

2

<u>ಕರ್ನಾಟಕ ಸರ್ಕಾರ</u>

ಸಂಖ್ಯೆ: ಮಮಇ 100 ಮಭಾಬ 2015

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:26.6.2015.

## <u>ಸೇರ್ಪಡೆ ಆದೇಶ</u>

ಮಹಿಳೆಯರ ಮತ್ತು ಮಕ್ಕಳ ಸಾಗಾಣೆ ಹಾಗೂ ಬಾಲವೇಶ್ಯಾ ಪದ್ಧತಿಯನ್ನು ತಡೆಗಟ್ಟಲು ಜಿಲ್ಲೆ, ತಾಲ್ಲೂಕು ಹಾಗೂ ಗ್ರಾಮ ಮಟ್ಟದಲ್ಲಿ ರಚಿಸಲಾಗಿರುವ ಕಾವಲು ಸಮಿತಿಗಳನ್ನು ಪುನರ್‌ರಚಿಸಿ ದಿನಾಂಕ:04.06.2013ರಂದು ಹೊರಡಿಸಲಾದ ಸರ್ಕಾರಿ ಆದೇಶ ಸಂ: ಮಮಇ 128 ಮಭಾಬ 2012ರ ಆದೇಶ ಭಾಗದ **"(ಇ) ಗ್ರಾಮ ಪಂಚಾಯ್ತಿ ಮಟ್ಟದ ಸಮಿತಿ ಅಡಿ ಕ್ರಮ ಸಂಖ್ಯೆ 10ರ"** ನಂತರ ಈ ಕೆಳಕಂಡಂತೆ ಸೇರ್ಪಡೆ ಮಾಡಿಕೊಂಡು ಓದಿಕೊಳ್ಳತಕ್ಕದ್ದು.

**11. ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಪ್ರತಿಯೊಂದು ಗ್ರಾಮ ಪಂಚಾಯ್ತಿ ಸದಸ್ಯರು – ಸದಸ್ಯರು**

**12. ಆ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಯ ಪ್ರತಿನಿಧಿ – ಸದಸ್ಯರು**

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ,**

26.6.2015
(ಸರಸಾ)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ.

ನಿರ್ದೇಶನಾಲಯ ... ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂ...
03 JUL 2015

105 227
13/7/15
600

**ಗೆ,**

1. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560 001.
2. ಸರ್ಕಾರದ ಮುಖ್ಯಕಾರ್ಯದರ್ಶಿ, ಕರ್ನಾಟಕ ಸರ್ಕಾರ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ.
5. ಸರ್ಕಾರದ ಕಾರ್ಯದರ್ಶಿ(ಪಿ.ಸಿ.ಎ.ಎಸ್), ಒಳಾಡಳಿತ ಇಲಾಖೆ, ವಿಧಾನಸೌಧ.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ.
7. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ.
8. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.

2..

9. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ, ಬೆಂಗಳೂರು.
10. ಎಲ್ಲಾ ಜಿಲ್ಲಾಧಿಕಾರಿಗಳು/ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು / ತಹಶೀಲ್ದಾರ್ (ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಮುಖಾಂತರ.)
11. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಕೃಷಿಭವನ, ನೃಪತುಂಗ ರಸ್ತೆ, ಬೆಂಗಳೂರು.
12. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಹಿಳಾ ಆಯೋಗ, ಬೆಂಗಳೂರು.
13. ವಾರ್ತಾಧಿಕಾರಿ, ವಾರ್ತಾ ಇಲಾಖೆ.
14. ಎಲ್ಲಾ ಉಪ ನಿರ್ದೇಶಕರು/ಸಹಾಯಕ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.(ನಿರ್ದೇಶಕರ ಮುಖಾಂತರ)
15. ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಮಟ್ಟದ ಕಾವಲು ಸಮಿತಿಗಳ ಎಲ್ಲಾ ಸದಸ್ಯರು (ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆರವರ ಮುಖಾಂತರ.)
16. ಶಾಖಾರಕ್ಷ ಕಡತ / ಹೆಚ್ಚುವರಿ ಪ್ರತಿಗಳು.